PAPER CLIPPINGS

ವಿಷಯ : DEPARTMENT / SUBJECT:

ಪತ್ರಿಕೆ : NAME OF THE NEWS PAPER:

ದಿನಾಂಕ : DATE : 19/3/2021

# ಜೆಡಿಎಸ್ ಧರಣಿ ಸಿಎಂ ಮನವೊಲಿಕೆ

## ಕಲಾಪ ಮುಗಿದ ಮೇಲೂ ಪ್ರತಿಭಟನೆ । ರಾತ್ರಿ ವಿಧಾನಸೌಧಕ್ಕೆ ದೌಡಾಯಿಸಿದ ಯಡಿಯೂರಪ್ಪ

19-3-21

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ತಮ್ಮ ಕ್ಷೇತ್ರಗಳಿಗೆ ಈ ಹಿಂದಿನ ಸರ್ಕಾರದ ಅವಧಿಯಲ್ಲಿ ಬಿಡುಗಡೆ ಮಾಡಲಾದ ಅನುದಾನ ತಡೆ ಹಿಡಿದಿರುವುದನ್ನು ವಿರೋಧಿಸಿ ಜೆಡಿಎಸ್ ಶಾಸಕರು ಗುರುವಾರ ವಿಧಾನಸಭೆಯಲ್ಲಿ ಕಲಾಪ ಮುಗಿದ ಬಳಿಕವೂ ಸ್ಪೀಕರ್ ಪೀಠದ ಮುಂಭಾಗ ಧರಣಿ ನಡೆಸಿದರು. ಅಹೋರಾತ್ರಿ ಮತ್ತು ಅನಿರ್ದಿಷ್ಟಾವಧಿ ಎಚ್ಚರಿಕೆಯೊಂದಿಗೆ ಧರಣಿ ಮುಂದುವರಿಸುತ್ತಿದ್ದಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಗೃಹ ಸಚಿವ ಬಸವರಾಜ ಬೊಮ್ಮಾಯಿ ಹಾಗೂ ಕ್ರೀಡಾ ಸಚಿವ ನಾರಾಯಣ ಗೌಡ ವಿಧಾನಸೌಧಕ್ಕೆ ದೌಡಾಯಿಸಿ ಜೆಡಿಎಸ್ ಶಾಸಕರ ಮನವೊಲಿಸುವಲ್ಲಿ ಸಫಲರಾದರು.

ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯವಾಗಿ ಚರ್ಚೆ ಆರಂಭಿಸಿದ ಜೆಡಿಎಸ್ ಶಾಸಕರು, ಎಚ್.ಡಿ. ಕುಮಾರಸ್ವಾಮಿ ಸಿಎಂ ಆಗಿದ್ದ ಅವಧಿಯಲ್ಲಿ ಮಂಜೂರಾಗಿದ್ದ ಯೋಜನೆಗಳಿಗೆ ಅನುದಾನ ತಡೆಹಿಡಿಯಲಾಗಿದೆ. ಕೂಡಲೇ ಅನುದಾನ ಒದಗಿಸಿ ಎಂದು ಕೈಮುಗಿದರು. ಚರ್ಚೆ ಬಳಿಕ ಉತ್ತರ ನೀಡಿದ ಬಸವರಾಜ ಬೊಮ್ಮಾಯಿ, ಈ ಹಿಂದೆ ಅನುದಾನ ಹಂಚಿಕೆಯಲ್ಲಿ ಅಸಮತೋಲನ ಉಂಟಾಗಿತ್ತು, ಕೋವಿಡ್ ಕಾರಣಕ್ಕೆ ಈ ಸಾಲಿನಲ್ಲಿ ಅನುದಾನ ಹಂಚಿಕೆ ಕಷ್ಟ. ಮುಂದಿನ ದಿನಗಳಲ್ಲಿ ಆದ್ಯತೆ ನೀಡಲಾಗುತ್ತದೆ ಎಂದರು. ಈ ಉತ್ತರಕ್ಕೆ ತೃಪ್ತರಾಗದ ಜೆಡಿಎಸ್ ಶಾಸಕರು, ಸಿಎಂ ಸೂಕ್ತ ಉತ್ತರ ನೀಡದಿದ್ದರೆ ಅಹೋರಾತ್ರಿ ಧರಣಿ ನಡೆಸುವುದಾಗಿ ಎಚ್ಚರಿಸಿದರು. ಬಳಿಕ ಸ್ಪೀಕರ್ ಪೀಠದ ಮುಂದೆ ಧಾವಿಸಿ ಧರಣಿ ಆರಂಭಿಸಿದರು. ಈ ವೇಳೆ ಸ್ಪೀಕರ್ ವಿಧೇಯಕವೊಂದಕ್ಕೆ ಅನುಮೋದನೆ ಪಡೆದುಕೊಂಡರು. ಬಾಕಿ ಪ್ರಕ್ರಿಯೆಯನ್ನು ಶುಕ್ರವಾರ ಕೈಗೆತ್ತಿಕೊಳ್ಳುವುದಾಗಿ ಹೇಳಿ ಕಲಾಪ ಮುಂದೂಡಿದರು.

ಸಂಜೆ 7 ಗಂಟೆಗೆ ಕಲಾಪ ಮುಗಿದು ಎಲ್ಲ ಶಾಸಕರು ಹೊರನಡೆದರೂ ಜೆಡಿಎಸ್ ಸದಸ್ಯರು ಮಾತ್ರ ಸ್ಥಳಬಿಟ್ಟು ಕದಲಲಿಲ್ಲ. ಕೊನೆಗೆ ಎಚ್.ಡಿ. ರೇವಣ್ಣ ಅವರನ್ನು ಕೊಠಡಿಗೆ ಕರೆಸಿಕೊಂಡು, ಈಗ ಧರಣಿ ಕೈಬಿಡಿ. ನಾಳೆ ಮತ್ತೆ ಈ ವಿಷಯದಲ್ಲಿ ಧರಣಿ ಮುಂದುವರಿಸುವಿರಂತೆ ಎಂದು ಕೋರಿದರೂ ಒಪ್ಪಲಿಲ್ಲ. ಹೀಗಾಗಿ ಧರಣಿ ನಿರತರಿಗೆ ಹಾಸಿಗೆ, ಹೊದಿಕೆ, ಊಟದ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸ್ಪೀಕರ್ ಸೂಚಿಸಿದರು. ರಾತ್ರಿ 8.20ಕ್ಕೆ ಮನೆಯಿಂದ ವಿಧಾನಸೌಧಕ್ಕೆ ದೌಡಾಯಿಸಿದ ಯಡಿಯೂರಪ್ಪ, ಹಣಕಾಸಿನ ಲಭ್ಯತೆ ನೋಡಿಕೊಂಡು ಅನುದಾನ ಬಿಡುಗಡೆ ಮಾಡುವ ಭರವಸೆ ನೀಡಿದರು. ಬಳಿಕ ಎಚ್.ಡಿ. ರೇವಣ್ಣ ನೇತೃತ್ವದ ಶಾಸಕರ ತಂಡ ಧರಣಿ ಹಿಂಪಡೆಯಿತು. ಈ ವಿಷಯವಾಗಿ ಮಾಧ್ಯಮಗಳಿಗೆ ಯಾವುದೇ ಪ್ರತಿಕ್ರಿಯೆ ನೀಡಲು ಸಿಎಂ ನಿರಾಕರಿಸಿದರು.



ವಿಜಯವಾಣಿ ಚಿತ್ರ

ವಿಧಾನಸಭೆಯಲ್ಲಿ ಗುರುವಾರ ರಾತ್ರಿ ಜೆಡಿಎಸ್ ಸದಸ್ಯರ ಪ್ರತಿಭಟನೆ.

### ಶಾಲೆ ಪರಿಹಾರ ನಿಧಿಗೆ ಕೈಹಾಕಿದ ಸರ್ಕಾರ!

**ಬೆಂಗಳೂರು:** ರಾಷ್ಟ್ರೀಯ ಹೆದ್ದಾರಿ ಹಾದು ಹೋದ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಕೇಂದ್ರ ಸರ್ಕಾರ 35ರಿಂದ 40 ಲಕ್ಷ ರೂ. ಪರಿಹಾರ ಧನ ಪಾವತಿಸಿದೆ. ಈ ಮೊತ್ತಕ್ಕೂ ರಾಜ್ಯ ಸರ್ಕಾರ ಕೈಹಾಕಿದೆ! ವಿಧಾನಪರಿಷತ್‌ನಲ್ಲಿ ಗುರುವಾರ ಬಜೆಟ್ ಮೇಲಿನ ಚರ್ಚೆ ವೇಳೆ ಜೆಡಿಎಸ್‌ನ ಎಸ್.ಎಲ್.ಭೋಜೇಗೌಡ ಈ ಅಚ್ಚರಿಯ ವಿಷಯ ಪ್ರಸ್ತಾಪಿಸಿ ಗಮನಸೆಳೆದರು. ಒಂದೆಡೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ದತ್ತು ತೆಗೆದುಕೊಳ್ಳಬೇಕು ಎಂದು ಶಾಸಕರಿಗೆ ದುಂಬಾಲು ಬಿದ್ದಿದ್ದರೆ, ಮತ್ತೊಂದೆಡೆ ಶಾಲೆಗೆ ಬಂದ ಪರಿಹಾರಧನವನ್ನು ಸರ್ಕಾರದ ಖಜಾನೆಗೆ ಹಿಂತಿರುಗಿಸಿ ಎಂದು ಇಲಾಖೆ ಅಧಿಕಾರಿಗಳು ಪತ್ರ ಬರೆದಿದ್ದಾರೆ ಎಂದರು.

» **ಪರಿಷತ್‌ನಲ್ಲಿ ಗಮನಸೆಳೆದ ಪ್ರಸ್ತಾಪ**

**ಸಿಎಂ ಜತೆಗೆ ಚರ್ಚೆ:** ಮಧ್ಯೆ ಪ್ರವೇಶಿಸಿದ ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ, ಮುಖ್ಯಮಂತ್ರಿ ಜತೆಗೆ ಈ ಬಗ್ಗೆ ಚರ್ಚಿಸಿ ಪರಿಹಾರ ಮೊತ್ತವನ್ನು ಆಯಾ ಶಾಲೆಗಳಿಗೆ ಹೊಸ ಕಟ್ಟಡ ನಿರ್ಮಾಣ, ಇತರ ಅಭಿವೃದ್ಧಿ ಕೆಲಸಗಳಿಗೆ ವಿನಿಯೋಗಿಸುವುದಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

## ರವಿಕುಮಾರ್ ಪ್ರಶ್ನೆ, ಸುಧಾಕರ್ ಉತ್ತರ, ಜಾ.ದಳ ಪ್ರತಿಭಟನೆ!

ಬಜೆಟ್ ಅಧಿವೇಶನ

**ಬೆಂಗಳೂರು:** ಮೂಲ ಸೌಕರ್ಯ, ಬೋಧಕ-ಬೋಧಕೇತರ ಸಿಬ್ಬಂದಿ ಕೊರತೆ ಮಧ್ಯೆ ರಾಜ್ಯದಲ್ಲಿ ನರ್ಸಿಂಗ್ ಹಾಗೂ ಅಲೈಡ್ ಹೆಲ್ತ್ ಸೈನ್ಸ್ ಕಾಲೇಜ್ ಪ್ರಾರಂಭಿಸಲಾಗಿದೆ ಎಂದು ಬಿಜೆಪಿಯ ಎನ್. ರವಿಕುಮಾರ್ ಪರಿಷತ್‌ನಲ್ಲಿ ಗಂಭೀರ ಆರೋಪ ಮಾಡಿದರು. 2020-21ನೇ ಸಾಲಿನಲ್ಲಿ ಹೊಸದಾಗಿ 62 ನರ್ಸಿಂಗ್ ಹಾಗೂ 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜ್ ಪ್ರಾರಂಭಿಸಲು ಅನುಮತಿ ನೀಡಲಾಗಿದೆ. ಕೆಲವೆಡೆ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಇಲ್ಲ. ಕಾಲೇಜ್ ಕಟ್ಟಡಗಳು ಇಲ್ಲ. ವಿದ್ಯಾರ್ಥಿಗಳು ಬೇರೆ ರಾಜ್ಯದಿಂದ ಪರೀಕ್ಷೆ ಬರೆಯಲು ಮಾತ್ರ ಆಗಮಿಸುತ್ತಾರೆ. ಇದು ಹಣ ಮಾಡುವ ದಂಧೆಯಾಗಿ ಮಾರ್ಪಡುತ್ತಿದೆ ಎಂದು ಗಮನ ಸೆಳೆದರು.

ಸಭಾಪತಿ ಹೊರಟ್ಟಿ ನೀವು ಬರೀ ಗಮನ ಸೆಳೆಯಿರಿ ಸಚಿವರು ಉತ್ತರ ನೀಡುತ್ತಾರೆ ಎಂದಾಗ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಕೆ. ಸುಧಾಕರ್ ಉತ್ತರ ನೀಡಿ, ಟಾಸ್ಕ್‌ಫೋರ್ಸ್ ಸೇರಿ ಇತರ ಕಮಿಟಿಗಳಿಂದ ಪರಿಶೀಲಿಸಿಯೇ ಅನುಮತಿ ನೀಡಲಾಗಿದೆ. ಮೂಲಸೌಲಭ್ಯ ಹೊಂದಿದ 47 ನರ್ಸಿಂಗ್ ಮತ್ತು 45 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜ್‌ಗಳಿಗೆ ಮಂಜೂರಾತಿ ನೀಡಲು ಶಿಫಾರಸು ಮಾಡಲಾಗಿದೆ. ಮೂಲಸೌಲಭ್ಯ ಹೊಂದಿಲ್ಲದ ಪ್ರಸ್ತಾವನೆ ತಿರಸ್ಕರಿಸಲಾಗಿದೆ ಎಂದು ಉತ್ತರಿಸಿದರು.



ಮಧ್ಯೆ ಪ್ರವೇಶಿಸಿದ ಜೆಡಿಎಸ್ ಸದಸ್ಯರು, ಇದರಲ್ಲಿ ದೊಡ್ಡ ಮಟ್ಟದ ಭ್ರಷ್ಟಾಚಾರ ನಡೆದಿದೆ. ಸದನ ಸಮಿತಿ ರಚಿಸಬೇಕು ಎಂದು ಒತ್ತಾಯಿಸಿದರು. ಉನ್ನತ ಮಟ್ಟದ ತನಿಖೆ ನಡೆಸಿ 3 ತಿಂಗಳಲ್ಲಿ ವರದಿ ತರಿಸಿಕೊಂಡು ಸದನದ ಮುಂದೆ ಒಪ್ಪಿಸಲಾಗುವುದು ಎಂದು ಸುಧಾಕರ್ ಹೇಳಿದರು. ಇದಕ್ಕೊಪ್ಪದ ಜೆಡಿಎಸ್ ಸದಸ್ಯರು, ಪೀಠದ ಮುಂದೆ ತೆರಳಿ ಸದನ ಸಮಿತಿ ರಚಿಸುವಂತೆ ಪಟ್ಟುಹಿಡಿದರು. ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ, ಸಚಿವರು ಪ್ರಾಮಾಣಿಕವಾಗಿ ತನಿಖೆ ನಡೆಸಿ ವರದಿ ಕೊಡುವುದಾಗಿ ಹೇಳಿದ್ದಾರೆ. ಪ್ರತಿಭಟನೆ ಕೈಬಿಡಿ ಎಂದು ಕೋರಿದರು. ಸರ್ಕಾರದಿಂದ ಸದನ ಸಮಿತಿ ರಚಿಸುವವರೆಗೆ ಜಾಗ ಬಿಟ್ಟು ಕದಲುವುದಿಲ್ಲ ಎಂದು ಹಠ ಹಿಡಿದರು. ಪರಿಣಾಮ 10 ನಿಮಿಷ ಸಭೆ ಮುಂದೂಡಲಾಯಿತು. ಆಡಳಿತ ಮತ್ತು ಜೆಡಿಎಸ್ ಸದಸ್ಯರು ಸಭಾಪತಿ ಕೊಠಡಿಗೆ ತೆರಳಿ ಚರ್ಚಿಸಿ ಮರಳಿ ಸದನಕ್ಕೆ ಆಗಮಿಸಿದರು. ಜೆಡಿಎಸ್ ಸದಸ್ಯರು ಧರಣಿ ಕೈಬಿಡಿ ಎಂದು ಸಭಾಪತಿಗಳು ಹಾಗೂ ಆಡಳಿತ ಪಕ್ಷದವರು ವಿನಂತಿಸಿದರು. ಆದರೂ ಧರಣಿ ಮುಂದುವರಿಸಿದ್ದರಿಂದ ಕಲಾಪವನ್ನು ಮುಂದೂಡಲಾಯಿತು.